# ಸಂವಿಧಾನ ಓದಿ ಮುನ್ನಡೆಯಿರಿ

## ಶಾಸಕರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ 'ಮೋಟಿವೇಶನ್'

## ತರಬೇತಿ ಶಿಬಿರ ಉದ್ಘಾಟನೆ

ಬೆಂಗಳೂರು, ಜೂ.26: ಯಾರು ಸಂವಿಧಾನವನ್ನು ಓದಿ ಅರ್ಥ ಮಾಡಿಕೊಳ್ಳುವುದಿಲ್ಲವೋ ಅವರು ಉತ್ತಮ ಶಾಸಕರಾಗಲು, ಸಂಸದರಾಗಲು ಸಾಧ್ಯವಿಲ್ಲ. ಆದುದರಿಂದ ಮೊದಲು ಸಂವಿಧಾನವನ್ನು ಓದಿ ಅದರ ಮೂಲಭೂತ ತತ್ವ ಮತ್ತು ಉದ್ದೇಶಗಳನ್ನು ಅರಿತುಕೊಳ್ಳಿ. ಸದನದ ನಿಯಮಾವಳಿಗಳನ್ನು ನಾವೇ ಮಾಡಿದ್ದೇವೆ. ಅದನ್ನು ಸರಿಯಾಗಿ ಓದಿ ಅರ್ಥ ಮಾಡಿಕೊಂಡರೆ ಜನರ ಸಮಸ್ಯೆಗಳನ್ನು ನಿಯಮಬದ್ಧವಾಗಿ ಸದನದ ಮುಂದೆ ಮಂಡಿಸಬಹುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೂತನ ಶಾಸಕರಿಗೆ ಕರೆ ನೀಡಿದ್ದಾರೆ.

ಸೋಮವಾರ ರಾಜ್ಯದ 16ನೇ ವಿಧಾನ ಸಭೆಗೆ ಮೊದಲಬಾರಿಗೆ ಆಯ್ಕೆಯಾಗಿರುವ ಸದಸ್ಯರಿಗೆ ಇಲ್ಲಿನ ನೆಲಮಂಗಲದ ಎಸ್‌ಡಿಎಂ ಇನ್‌ಸ್ಟಿಟ್ಯೂಟ್ ಆಫ್ ನ್ಯಾಚುರೋಪತಿ ಕ್ಷೇಮವನದಲ್ಲಿ ಹಮ್ಮಿಕೊಂಡಿರುವ ಮೂರು ದಿನಗಳ ಕಾಲದ ತರಬೇತಿ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯ ಸರಕಾರಗಳು ಜನರಿಗೆ ಪೂರಕವಾದ ಕಾನೂನು ಜಾರಿಗೆ ತರಬೇಕು. ಮಾರಕವಾದ ಕಾನೂನು ಬದಲಿಸಬೇಕು. ಹಂತ ಹಂತವಾಗಿ ಪ್ರಜಾಪ್ರಭುತ್ವವನ್ನು ಮತ್ತಷ್ಟುಗಟ್ಟಿಗೊಳಿಸಬೇಕು ಎಂದ ಅವರು, ವಿಧಾನಸಭೆ ಸಂಸದೀಯ ಪ್ರಜಾಪ್ರಭುತ್ವದ ದೇಗುಲ.

8ನೇ ಪುಟಕ್ಕೆ



ವಿಧಾನಸಭೆಯ ನೂತನ ಶಾಸಕರಿಗಾಗಿ ನೆಲಮಂಗಲದ ಎಸ್‌ಡಿಎಂ ಇನ್‌ಸ್ಟಿಟ್ಯೂಟ್ ಆಫ್ ನ್ಯಾಚುರೋಪತಿ ಕ್ಷೇಮವನದಲ್ಲಿ ಹಮ್ಮಿಕೊಳ್ಳಲಾಗಿರುವ ಮೂರು ದಿನಗಳ ತರಬೇತಿ ಶಿಬಿರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಸ್ಪೀಕರ್ ಯು.ಟಿ. ಖಾದರ್, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಸಚಿವರಾದ ಎಚ್.ಕೆ. ಪಾಟೀಲ್ ಹಾಗೂ ಝುಮೀರ್ ಅಹ್ಮದ್ ಖಾನ್ ಮತ್ತಿತರರು ಉಪಸ್ಥಿತರಿದ್ದರು.

### ನಾನು, ಈಶ್ವರಪ್ಪ, ಸಿ.ಟಿ.ರವಿ ಎಮ್ಮೆ, ಕುರಿ ಕಾಯಬೇಕಿತ್ತು

ನಾನು, ನನ್ನಂಥವರು ಶಾಸಕರಾಗಲು, ಮುಖ್ಯಮಂತ್ರಿ ಆಗಲು ಡಾ.ಅಂಬೇಡ್ಕರ್ ಅವರು ನೀಡಿದ ಸಂವಿಧಾನವೇ ಮೂಲ ಕಾರಣ. ಸಂವಿಧಾನ ಇಲ್ಲದಿದ್ದರೆ ಬಿಜೆಪಿ ನಾಯಕರಾದ ಸಿ.ಟಿ.ರವಿ, ಕೆ.ಎಸ್.ಈಶ್ವರಪ್ಪ , ನಾನು ಎಲ್ಲೋ ಕುರಿ, ಹಸು ಕಾಯುತ್ತಾ ಇರಬೇಕಾಗಿತ್ತು. ಆದ್ದರಿಂದ ಸಂವಿಧಾನದ ಮೌಲ್ಯ ಅರಿತುಕೊಳ್ಳಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮನವರಿಕೆ ಮಾಡಿಸಿದರು.

### ನೂರು ಕುರಿ ಎಣಿಸಕ್ಕೆ ಬಾರದವನು!

ನಾನು ಮೊದಲ ಬಾರಿ ಹಣಕಾಸು ಸಚಿವನಾದಾಗ 'ನೂರು ಕುರಿ ಎಣಿಸಲು ಬಾರದವನು ಬಜೆಟ್ ಹೇಗೆ ಮಾಡುತ್ತಾನೆ?' ಎಂದು ಲಂಕೇಶ್ ಪತ್ರಿಕೆ ಟೀಕಿಸಿತ್ತು. ಟೀಕೆಯನ್ನು ನಾನು ಸವಾಲಾಗಿ ಸ್ವೀಕರಿಸಿ ನಿರಂತರ ವಿಷಯ ತಜ್ಞರ ಜತೆ ಚರ್ಚಿಸಿ ಬಜೆಟ್ ಮಂಡಿಸಿದೆ. ಮರುದಿನ ದಿ ಹಿಂದೂ ಪತ್ರಿಕೆ ನನ್ನ ಬಜೆಟ್ ಅನ್ನು ಅತ್ಯುತ್ತಮ ಎಂದು ಶ್ಲಾಘಿಸಿ ಸಂಪಾದಕೀಯ ಬರೆಯಿತು. ಹೀಗಾಗಿ ಜ್ಞಾನ ದಾಹ ಮತ್ತು ಅಧ್ಯಯನಶೀಲತೆಯನ್ನು ಬೆಳೆಸಿಕೊಳ್ಳಿ ಎಂದು ಶಾಸಕರಿಗೆ ಸಿದ್ದರಾಮಯ್ಯ ಸಲಹೆ ಮಾಡಿದರು.

### ವಾಟಾಳ್ ಮಾದರಿ ಸಿಎಂ ಮೆಚ್ಚುಗೆ

ಕನ್ನಡ ಪರ ಹೋರಾಟಗಾರ ವಾಟಾಳ್ ನಾಗರಾಜ್ ಅವರು ಒಬ್ಬ ಮಾದರಿ ಶಾಸಕರಾಗಿದ್ದರು. ಅಧಿವೇಶನದ ಗಂಟೆ ಆಗುತ್ತಿದ್ದಂತೆ ಸದನದ ಒಳಗೆ ಬಂದು ಅಧಿವೇಶನ ಮುಗಿಯುವವರೆಗೂ ಅಲುಗಾಡದೆ ಕೂರುತ್ತಿದ್ದರು. ಇದನ್ನು ಪ್ರತಿಯೊಬ್ಬರೂ ಪಾಲಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.